ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)
ಹದಿಮೂರನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಮಂಗಳವಾರ, ದಿನಾಂಕ 13ನೇ ಸೆಪ್ಟೆಂಬರ್, 2022
(ಸಮಯ: ಬೆಳಿಗ್ಗೆ 11.00 ಗಂಟೆಗೆ)

----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಎರಡನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಎರಡನೇ ಪಟ್ಟಿ

2. ಕಾರ್ಯದರ್ಶಿಯವರ ವರದಿ

ಕಾರ್ಯದರ್ಶಿಯವರು:-

ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಷ್ಟ್ರಪತಿಗಳು / ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಸಭೆಯ ಮುಂದೆ ಮಂಡಿಸುವುದು.

3. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಮಾನ್ಯ ಸದಸ್ಯರುಗಳಿಗೆ ಪ್ರತ್ಯೇಕವಾಗಿ ಕಳುಹಿಸಲಾಗಿರುವ ಮೊದಲನೇ ಮತ್ತು ಎರಡನೇ ಪಟ್ಟಿ ರೀತ್ಯಾ.

4. ಶಾಸನ ರಚನೆ

<u>ವಿಧೇಯಕಗಳನ್ನು ಮಂಡಿಸುವುದು</u>

1. **ಶ್ರೀ ಬಸವರಾಜ ಬೊಮ್ಮಾಯಿ (ಮಾನ್ಯ ಮುಖ್ಯಮಂತ್ರಿಗಳು) ಅವರು:-**

    ಅ) 2022ನೇ ಸಾಲಿನ ಕರ್ನಾಟಕ ಹಣಕಾಸು ಸಂಸ್ಥೆಗಳಲ್ಲಿ ಠೇವಣಿದಾರರ ಹಿತಾಸಕ್ತಿ ಸಂರಕ್ಷಣೆ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

    ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

2. **ಶ್ರೀ ಆರ್. ಅಶೋಕ (ಮಾನ್ಯ ಕಂದಾಯ ಸಚಿವರು) ಅವರು:–**

   ಅ) 2022ನೇ ಸಾಲಿನ ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

   ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

3. **ಶ್ರೀ ಎನ್. ನಾಗರಾಜ (ಎಂಟಿಬಿ) (ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ ಸಾರ್ವಜನಿಕ ವಲಯ ಉದ್ಯಮಗಳ ಸಚಿವರು) ಅವರು:–**

   ಅ) 2022ನೇ ಸಾಲಿನ ಕರ್ನಾಟಕ ಮುನಿಸಿಪಾಲಿಟಿಗಳ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

   ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

4. **ಡಾ. ನಾರಾಯಣಗೌಡ (ಮಾನ್ಯ ರೇಷ್ಮೆ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು) ಅವರು:–**

   ಅ) 2022ನೇ ಸಾಲಿನ ಕರ್ನಾಟಕ ರೇಷ್ಮೆಹುಳುಬಿತ್ತನೆ, ರೇಷ್ಮೆಗೂಡು ಮತ್ತು ರೇಷ್ಮೆನೂಲು (ಉತ್ಪಾದನೆ, ಸರಬರಾಜು, ವಿತರಣೆ ಮತ್ತು ಮಾರಾಟ ವಿನಿಯಮನ) (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

   ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

5. ಗಮನ ಸೆಳೆಯುವ ಸೂಚನೆಗಳು

1) **ಶ್ರೀ ಎ.ಎಸ್. ಪಾಟೀಲ (ನಡಹಳ್ಳಿ) ಅವರು** – ತಾಳಿಕೋಟಿ ತಾಲ್ಲೂಕ ಕೇಂದ್ರದಲ್ಲಿ ತಾಲ್ಲೂಕ ಆರೋಗ್ಯಾಧಿಕಾರಿಗಳ ಕಛೇರಿ ಮತ್ತು ಆಸ್ಪತ್ರೆಯನ್ನು ಸ್ಥಾಪಿಸುವ ಬಗ್ಗೆ ಹಾಗೂ ಮುದ್ದೇಬಿಹಾಳ ತಾಲ್ಲೂಕಿನ ತಂಗಡಗಿ ಮತ್ತು ಮಡಿಕೇಶ್ವರ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸಮುದಾಯ ಆರೋಗ್ಯ ಕೇಂದ್ರಗಳನ್ನಾಗಿ ಮೇಲ್ದರ್ಜೆಗೇರಿಸುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

2) **ಡಾ. ಯತೀಂದ್ರ ಸಿದ್ದರಾಮಯ್ಯ ಅವರು** – ನಂಜನಗೂಡು ತಾಲ್ಲೂಕು ಚಿಕ್ಕಯ್ಯನ ಛತ್ರ ಹೋಬಳಿಯ ಹದಿನಾರು ಗ್ರಾಮದಲ್ಲಿ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ನಿರ್ಮಾಣಕ್ಕೆ ಜಮೀನು ಮಂಜೂರಾಗಿದ್ದರೂ ಟಿ.ಎಸ್.ಪಿ. ಯೋಜನೆಯಲ್ಲಿ ಅನುದಾನ ಮಂಜೂರಾತಿ ನೀಡದ ಕಾರಣ ವಸತಿ ಶಾಲೆಯ ಮಕ್ಕಳಿಗೆ ಕಟ್ಟಡ ನಿರ್ಮಿಸಲು ತೊಂದರೆಯಾಗುತ್ತಿರುವ ಬಗ್ಗೆ ಮಾನ್ಯ ಸಾರಿಗೆ ಹಾಗೂ ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

3) **ಶ್ರೀ ರಾಜಾ ವೆಂಕಟಪ್ಪ ನಾಯಕ್ ಅವರು** – ಮಾನ್ವಿ ವಿಧಾನಸಭಾ ಕ್ಷೇತ್ರದ ಸಿರವಾರ ತಾಲ್ಲೂಕಿನಲ್ಲಿ ಕರ್ನಾಟಕ ನೀರಾವರಿ ನಿಗಮದ 8 ಎಕರೆ ಜಮೀನನ್ನು ಹೊರಾಂಗಣ ಕ್ರೀಡಾಂಗಣ ನಿರ್ಮಾಣಕ್ಕಾಗಿ ಮಂಜೂರು ಮಾಡುವ ಬಗ್ಗೆ ಮಾನ್ಯ ಜಲಸಂಪನ್ಮೂಲ ಸಚಿವರ ಗಮನ ಸೆಳೆಯುವುದು.

4) **ಶ್ರೀ ದೊಡ್ಡಗೌಡರ ಮಹಾಂತೇಶ ಬಸವಂತರಾಯ ಅವರು** – ಕಿತ್ತೂರು ವಿಧಾನಸಭಾ ಕ್ಷೇತ್ರದ ಕಿತ್ತೂರು ತಾಲ್ಲೂಕಿಗೆ ಪಶು ಆಸ್ಪತ್ರೆ ನಿರ್ಮಾಣ ಮಾಡುವ ಬಗ್ಗೆ ಹಾಗೂ ಶಿಥಿಲಗೊಂಡಿರುವ ಪ್ರಾಥಮಿಕ ಪಶು ಚಿಕಿತ್ಸಾ ಕೇಂದ್ರ ಮತ್ತು ಪಶು ಆಸ್ಪತ್ರೆಗಳ ಕಟ್ಟಡಗಳ ನಿರ್ಮಾಣಕ್ಕೆ ಆರ್.ಐ.ಡಿ.ಎಫ್. ಅಡಿಯಲ್ಲಿ ಅನುದಾನ ಬಿಡುಗಡೆ ಮಾಡುವ ಬಗ್ಗೆ ಮಾನ್ಯ ಪಶುಸಂಗೋಪನೆ ಸಚಿವರ ಗಮನ ಸೆಳೆಯುವುದು.

5) **ಶ್ರೀ ಎಸ್. ರಾಮಪ್ಪ ಅವರು** – ಹರಿಹರ ನಗರದಲ್ಲಿ ಜಿ+2 ಮನೆಗಳನ್ನು ನಿರ್ಮಾಣ ಮಾಡುವ ಬಗ್ಗೆ ಮಾನ್ಯ ವಸತಿ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರ ಗಮನ ಸೆಳೆಯುವುದು.

6) **ಶ್ರೀ ಕೆ. ಮಹದೇವ ಅವರು** – ಪಿರಿಯಾಪಟ್ಟಣ ಮತಕ್ಷೇತ್ರದಲ್ಲಿ ಮಂಜೂರಾಗಿರುವ ಆರು ವಿದ್ಯುತ್ ಉಪ ಕೇಂದ್ರಗಳು ಕಾರ್ಯನಿರ್ವಹಿಸುವಂತೆ ಮಾಡುವ ಬಗ್ಗೆ ಮಾನ್ಯ ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

7) **ಶ್ರೀ ಯಶವಂತರಾಯಗೌಡ ವಿಠ್ಠಲಗೌಡ ಪಾಟೀಲ ಅವರು** – ರಾಜ್ಯದಲ್ಲಿ ಸರ್ಕಾರಿ ಗೋಮಾಳ ಜಮೀನನ್ನು ಸಂರಕ್ಷಣೆ ಮಾಡಿ, ಅತಿಕ್ರಮಣ ಮಾಡದಂತೆ ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

8) **ಶ್ರೀ ಹೆಚ್.ಕೆ. ಪಾಟೀಲ ಅವರು** – ವೈದ್ಯಕೀಯ ಶಿಕ್ಷಣ ಪೂರೈಸಿ ಒಂದು ವರ್ಷದ ಇಂಟರ್ನ್‌ಶಿಪ್ ಮಾಡುತ್ತಿರುವ ವೈದ್ಯರುಗಳಿಗೆ ಸರ್ಕಾರಿ ಹಾಗೂ ಖಾಸಗಿ ಸಂಸ್ಥೆಗಳಲ್ಲಿ ಏಕರೂಪದಲ್ಲಿ ಇಂಟರ್ನ್‌ಶಿಪ್ ಭತ್ಯೆಯನ್ನು ನೀಡುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

ಎಂ.ಕೆ. ವಿಶಾಲಾಕ್ಷಿ
ಕಾರ್ಯದರ್ಶಿ

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
http://kla.kar.nic.in/assembly/lob/lob.htm